**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/04/ಇಎಸ್‌ಟಿ/2(ಬಿ)/2019-20 (ಭಾಗ-2)

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001,
ದಿನಾಂಕ: 20.03.2020.

## ಹಿಂಬರಹ

ರಾಜ್ಯದ ವಿವಿಧ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಕೋಷ್ಟಕದಲ್ಲಿ ನಮೂದಿಸಲಾಗಿರುವ ಉಪನ್ಯಾಸಕರು ವಿವಿಧ ಇಲಾಖೆಗಳಲ್ಲಿ ಅರ್ಜಿ ಅಹ್ವಾನಿಸಲಾಗಿರುವ ಹುದ್ದೆಗೆ ಅರ್ಜಿ ಸಲ್ಲಿಸಲು ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿರುತ್ತಾರೆ. ಸದರಿ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ವಿವರ ಈ ಕೆಳಕಂಡಂತಿರುತ್ತದೆ.

| ಕ್ರ ಸಂ | ಉಪನ್ಯಾಸಕರ ಹೆಸರು (ಶ್ರೀಯುತರಾದ) ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ವಿಭಾಗ | ಅರ್ಜಿ ಸಲ್ಲಿಸಲು ಕೋರಲಾದ ಹುದ್ದೆ/ಪರೀಕ್ಷೆ ಮತ್ತು ಇಲಾಖೆ/ಪರೀಕ್ಷಾ ಪ್ರಾಧಿಕಾರ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಪ್ರಸ್ತಾವನೆಯ ದಿನಾಂಕ | ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸ್ವೀಕೃತಗೊಂಡ ದಿನಾಂಕ |
|---|---|---|---|---|---|---|
| (1) | (2) | (3) | (4) | (5) | (6) | (7) |
| 1. | ಶ್ರೀಮತಿ ನಂದಿನಿ. ಜೆ.ಸಿ., ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಶಿರಾಳಕೊಪ್ಪ. | ವಿಜ್ಞಾನ | ಕೆ.ಎಸ್.ಇ.ಟಿ | 04.03.2020 | 29.02.2020 | 07.03.2020 |
| 2. | ಶ್ರೀ ಪ್ರಶಾಂತಕುಮಾರ ಜೆ., ಸರ್ಕಾರಿ ಪಾಲಿಟೆಕ್ನಿಕ್, ಶ್ರೀರಂಗಪಟ್ಟಣ. | ಯಾಂತ್ರಿಕ | ಕರ್ನಾಟಕ ಗೆಜೆಟೆಡ್ ಪ್ರೋಬೇಷನರಿ ಹುದ್ದೆಗಳು (ಗ್ರೂಪ್-ಎ & ಬಿ) ಕೆ.ಪಿ.ಎಸ್.ಸಿ | 06.03.2020 | 05.03.2020 | 13.03.2020 |
| 3. | ಶ್ರೀ ಕಿರಣ್‌ಕುಮಾರ್, ಬಿ.ಎಸ್., ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು. | ಯಾಂತ್ರಿಕ | | 06.03.2020 | 09.03.2020 | 13.03.2020 |
| 4. | ಶ್ರೀಮತಿ ನಾಗಶ್ರೀ ಎನ್., ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು. | ಇ & ಸಿ | | 06.03.2020 | 09.03.2020 | 13.03.2020 |
| 5. | ಶ್ರೀ ಜಯರಾಮು .ಹೆಚ್. ಕೆ, ಸರ್ಕಾರಿ ಪಾಲಿಟೆಕ್ನಿಕ್, ನಾಗಮಂಗಲ. | ಸಿ.ಎಸ್ | ನಾಗರೀಕ ಸೇವಾ ಪರೀಕ್ಷೆ- ಯು.ಪಿ.ಎಸ್.ಸಿ | 03.03.2020 | 05.03.2020 | 13.03.2020 |

ಈ ಬಗ್ಗೆ ಪರಿಶೀಲಿಸಲಾಗಿ, ನಿರ್ದೇಶನಾಲಯದ ಸುತ್ತೋಲೆ ದಿನಾಂಕ: 10.04.2019ರಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಭೋಧಕೇತರ ಸಿಬ್ಬಂದಿಗಳು ಕೇಂದ್ರ/ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಲಾಗುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿ ನಿರ್ದೇಶನಾಲಯಕ್ಕೆ ಮನವಿ ಸಲ್ಲಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಅದರಲ್ಲಿ ನಿರಾಕ್ಷೇಪಣ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕಿಂತ 15 ದಿನಗಳೊಳಗಾಗಿ ನಿರ್ದೇಶನಾಲಯಕ್ಕೆ ಅರ್ಜಿ ಸಲ್ಲಿಕೆಯಾಗಬೇಕೆಂದು ತಿಳಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗಳು ನಿರ್ದೇಶನಾಲಯಕ್ಕೆ ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದ ನಂತರ ಸ್ವೀಕೃತಗೊಂಡಿರುತ್ತದೆ. **ಆದ್ದರಿಂದ ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪಮಾಣ ಪತ್ರ ಕೋರಲಾದ ಮನವಿಗಳನ್ನು ಪುರಸ್ಕರಿಸಲಾಗುವುದಿಲ್ಲವೆಂದು ತಿಳಿಸಲಾಗಿದೆ.** ಇನ್ನು ಮುಂದೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರಿ ನಿರ್ದೇಶನಾಲಯಕ್ಕೆ ಅರ್ಜಿ ಸಲ್ಲಿಸುವಾಗ ನಿರ್ದೇಶನಾಲಯದ ಸುತ್ತೋಲೆ ದಿನಾಂಕ: 10.04.2019ರಲ್ಲಿನ ಮಾರ್ಗಸೂಚಿಗಳನ್ನು ಪಾಲಿಸುವಂತೆ ಸಂಬಂಧಪಟ್ಟ ಸಂಸ್ಥೆಗಳ ಪ್ರಾಚಾರ್ಯರಿಗೆ ತಿಳಿಸಲಾಗಿದೆ.

**ಆಡಳಿತಾಧಿಕಾರಿ**
**ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ**

ಇವರಿಗೆ:

ಮೇಲ್ಕಂಡ ಉಪನ್ಯಾಸಕರಿಗೆ (ಪ್ರಾಚಾರ್ಯರ ಮೂಲಕ).

ಪ್ರತಿ:

1. ಪ್ರಾಚಾರ್ಯರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಶಿರಾಳಕೊಪ್ಪ.
2. ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್, ಶ್ರೀರಂಗಪಟ್ಟಣ.
3. ಪ್ರಾಚಾರ್ಯರು, ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು.
4. ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್, ನಾಗಮಂಗಲ.
5. ಇ-ಆಡಳಿತ ವಿಭಾಗಕ್ಕೆ.
6. ಕಛೇರಿ ಪ್ರತಿ.